# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ　　ದಿನಾಂಕ : DATE : 20/09/2019

### ಸರ್ಕಾರಿ ನೌಕರರ ಶವಸಂಸ್ಕಾರ ಭತ್ಯೆ ₹25 ಸಾವಿರಕ್ಕೆ ಹೆಚ್ಚಳ?

ಬೆಂಗಳೂರು: ರಾಜ್ಯ ಸರ್ಕಾರಿ ನೌಕರರು ಸೇವಾ ಅವಧಿಯಲ್ಲಿ ಮೃತಪಟ್ಟರೆ ನೀಡಲಿರುವ ಶವಸಂಸ್ಕಾರ ಭತ್ಯೆಯನ್ನು ಈಗಿನ ₹ 5 ಸಾವಿರದಿಂದ ₹ 25 ಸಾವಿರಕ್ಕೆ ಹೆಚ್ಚಿಸಲು ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಮುಖ್ಯ ಕಾರ್ಯದರ್ಶಿಯವರಿಗೆ ಸೂಚಿಸಿದ್ದಾರೆ.

₹ 5 ಸಾವಿರದಲ್ಲಿ ಶವಸಂಸ್ಕಾರವನ್ನು ಗೌರವಯುತವಾಗಿ ಮಾಡಲು ಸಾಧ್ಯವಿಲ್ಲ. ಭತ್ಯೆಯನ್ನು ₹25 ಸಾವಿರಕ್ಕೆ ಹೆಚ್ಚಿಸಬೇಕು ಎಂದು ಕರ್ನಾಟಕ ರಾಜ್ಯ ನೌಕರರ ಸಂಘವು ಈಚೆಗೆ ಮನವಿ ಸಲ್ಲಿಸಿತ್ತು. ಇದಕ್ಕೆ ಸ್ಪಂದಿಸಿ ಮುಖ್ಯಮಂತ್ರಿ ಅವರು ಈ ಸೂಚನೆ ನೀಡಿದ್ದಾರೆ.

6